ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಬಂದರು ಇಲಾಖೆಯಲ್ಲಿ ಹೊರಗುತ್ತಿಗೆ ಸಿಬ್ಬಂದಿಗೆ ಕಿರುಕುಳ ನೀಡುತ್ತಿರುವ ಬಗ್ಗೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

39 (217) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಾರವಾರ ಜಿಲ್ಲೆಯ ಬಂದರು ಇಲಾಖೆಯಲ್ಲಿ ಹೊರಗುತ್ತಿಗೆ ಸಿಬ್ಬಂದಿಗಳಿಗೆ ಕಿರುಕುಳ ನಿರಂತರವಾಗಿದ್ದು ವೇತನದ ಅಲ್ಪ ಪಾಲನ್ನು ಗುತ್ತಿಗೆದಾರರು ಪಡೆಯುತ್ತಿರುವ ದೂರು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಬಂದರು ಇಲಾಖೆಯಲ್ಲಿ ಹಾಲಿ ದುಡಿಯುತ್ತಿರುವ 51 ಹೊರ ಗುತ್ತಿಗೆ ನೌಕರರು ತಲಾ ಎರಡು ಸಾವಿರ ರೂಪಾಯಿಗಳನ್ನು ಗುತ್ತಿಗೆದಾರರಿಗೆ ಮರು ಪಾವತಿಸುತ್ತಿರುವುದರಿಂದ ಕುಟುಂಬ ನಿರ್ವಹಣೆಗೆ ಕಷ್ಟಪಡುತ್ತಿದ್ದು ಇದನ್ನು ಸರ್ಕಾರ ಕೂಡಲೇ ಪರಿಶೀಲಿಸಿ ಸದರಿ ಗುತ್ತಿಗೆದಾರರ ಮೇಲೆ ಸೂಕ್ತ ಕ್ರಮ ಕೈಗೊಂಡು ನೌಕರರಿಗೆ ಸರಿಯಾದ ವ್ಯವಸ್ಥೆ ಮಾಡುವುದೇ ; (ವಿವರ ನೀಡುವುದು)

(ಇ) ಕಾರವಾರ ಬಂದರು ಇಲಾಖೆಯಲ್ಲಿ ಈ ಹಿಂದೆ ಸೇವೆ ಮಾಡಿ ಕೆಲ ತಿಂಗಳ ಹಿಂದೆ ನಿವೃತ್ತರಾದ ಹಿರಿಯ ಅಧಿಕಾರಿಯೋರ್ವರು ನಿವೃತ್ತಿಯ ನಂತರವೂ ಸೇವೆ ಪಡೆಯಲು ಸರ್ಕಾರ ಮುಂದಾಗಿದ್ದು, ಅವರನ್ನು ಮರು ನೇಮಕ ಮಾಡಬಾರದೆಂದು ಬಂದರು ಇಲಾಖೆ ಸಿಬ್ಬಂದಿ ವಿನಂತಿಸಿದ್ದು, ಈ ಬಗ್ಗೆ ಸರ್ಕಾರದ ಗಮನ ಹರಿಸಿ ಮರು ನೇಮಕ ಮಾಡದಂತೆ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)